ಕರ್ನಾಟಕ ಸರ್ಕಾರ

# ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ, ಇವರ ಕಾರ್ಯಾಲಯ, ಚಿತ್ರದುರ್ಗ ಜಿಲ್ಲೆ,

---

**ವಿಷಯ:** ಕೋವಿಡ್-19 ಸಾಂಕ್ರಾಮಿಕ ರೋಗದ ಹರಡುವಿಕೆಯು ಪುನಃ ಪ್ರಾರಂಭವಾಗಿದ್ದು, ರೋಗ ತಡೆ ಹಾಗೂ ನಿಯಂತ್ರಣ ಸಂಬಂಧ ಚಿತ್ರದುರ್ಗ ಜಿಲ್ಲಾ ವ್ಯಾಪ್ತಿಯಲ್ಲಿ ಮುಂಬರುವ ಧಾರ್ಮಿಕ ಹಬ್ಬಗಳ ಸಂದರ್ಭದಲ್ಲಿ ಅನುಸರಿಸಬೇಕಾಗಿರುವ ಕ್ರಮಗಳ ಕುರಿತು ಮಾರ್ಗಸೂಚಿಗಳು.

**ಉಲ್ಲೇಖ:-** 1. ಕರ್ನಾಟಕ ಸಾಂಕ್ರಾಮಿಕ ರೋಗಗಳ, ಕೋವಿಡ್-19 ರೆಗ್ಯೂಲೇಷನ್-2020ರ ಅಧಿಸೂಚನೆ ಸಂಖ್ಯೆ ಹೆಚ್‌ಎಫ್‌ಡಬ್ಲ್ಯೂ 54 ಸಿಜಿಎಂ 2020, ದಿ:11-3-2020

2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ಇವರ ಆದೇಶ ಸಂಖ್ಯೆ ಆಕುಕ 59 ಸಿಜಿಎಂ 2021, ದಿನಾಂಕ:25-3-2021 ಮತ್ತು ಸೇರ್ಪಡೆ ಆದೇಶದ ದಿನಾಂಕ:27-3-2021.

****%%****

**ಪ್ರಸ್ತಾವನೆ:-**

ಕೋವಿಡ್-19 ಸಾಂಕ್ರಾಮಿಕ ರೋಗದ ಹರಡುವಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರವು ಜಾರಿಗೊಳಿಸಿದ ಕ್ರಮಗಳನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಲಾಗುತ್ತಿರುತ್ತದೆ. ಪ್ರಸ್ತುತ ರಾಜ್ಯದಲ್ಲಿ ಕೋವಿಡ್-19 ಸಾಂಕ್ರಾಮಿಕದ ಹರಡುವಿಕೆಯ ಆತಂಕವು ಪುನಃ ಪ್ರಾರಂಭವಾಗಿದ್ದು, ಈ ಹಿನ್ನಲೆಯಲ್ಲಿ ಮುಂಬರುವ ಧಾರ್ಮಿಕ ಹಬ್ಬಗಳಾದ ಯುಗಾದಿ, ಹೋಳಿ ಹಬ್ಬ, ಷಬ್-ಎ-ಬರಾತ್, ಗುಡ್ ಫ್ರೈಡೇ ಇತ್ಯಾದಿ ಹಬ್ಬಗಳ ಸಂದರ್ಭದಲ್ಲಿ ಸಾರ್ವಜನಿಕ ಸ್ಥಳಗಳು/ಮೈದಾನಗಳು/ಉದ್ಯಾನವನಗಳು/ ಮಾರುಕಟ್ಟೆ/ಧಾರ್ಮಿಕ ಪ್ರದೇಶಗಳು ಇತ್ಯಾದಿಗಳಲ್ಲಿ ಸಾರ್ವಜನಿಕ ಸಮಾರಂಭಗಳು/ಸಭೆಗಳನ್ನು ನಡೆಸದಂತೆ ಹಾಗೂ ಧಾರ್ಮಿಕ ಹಬ್ಬಗಳಿಗೆ ಸಂಬಂಧಿಸಿದಂತೆ ಜಾತ್ರೆಗಳು/ಮೇಳಗಳಲ್ಲಿ ಗುಂಪು ಸೇರುವುದನ್ನು ಸಹ ಉಲ್ಲೇಖ (2)ರ ಆದೇಶದಲ್ಲಿ ನಿಷೇಧಿಸಲಾಗಿರುತ್ತದೆ.

ಜಿಲ್ಲೆಯಲ್ಲಿ ಪುನಃ ಕೋವಿಡ್-19 ಸಾಂಕ್ರಾಮಿಕದ ಹರಡುವಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಬೇಕಾಗಿರುತ್ತದೆ. ಈ ಹಿನ್ನಲೆಯಲ್ಲಿ ಈ ಕೆಳಕಂಡಂತೆ ಆದೇಶ.

## :: ಆದೇಶ ::

**ಸಂ:ವಿಪತ್ತು ನಿರ್ವಹಣೆ:ಕೋವಿಡ್-19:ಸಿಆರ್-1/2020-21** **ದಿನಾಂಕ:28-3-2021**

ಪ್ರಸ್ತಾವನೆಯಲ್ಲಿ ವಿವರಿಸಲಾಗಿರುವಂತೆ ಶ್ರೀಮತಿ ಕವಿತಾ ಎಸ್.ಮನ್ನಿಕೇರಿ, ಭಾ.ಆ.ಸೇ., ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ, ಚಿತ್ರದುರ್ಗ ಆದ ನಾನು ಸಾಂಕ್ರಾಮಿಕ ಕಾಯ್ದೆ-1987 ಮತ್ತು ಕರ್ನಾಟಕ ಕೋವಿಡ್-19 ರೆಗ್ಯೂಲೇಷನ್ ಕಾಯ್ದೆ 2020 ನಿಯಮ 12ರಲ್ಲಿ ಹಾಗೂ ವಿಪತ್ತು ನಿರ್ವಹಣಾ ಕಾಯ್ದೆ-2005ರ ಕಲಂ 30 ಉಪನಿಯಮ (24) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಜಿಲ್ಲೆಯಲ್ಲಿ ಮುಂಬರುವ ಧಾರ್ಮಿಕ ಹಬ್ಬಗಳಾದ ಯುಗಾದಿ, ಹೋಳಿ ಹಬ್ಬ, ಷಬ್-ಎ-ಬರಾತ್, ಗುಡ್‌ಫ್ರೈಡೇ ಮುಂತಾದ ಹಬ್ಬಗಳು ಸೇರಿದಂತೆ ವಿವಿಧ ಜಾತ್ರೆಗಳು/ಮೇಳಗಳಲ್ಲಿ ಗುಂಪು ಸೇರದಂತೆ, ಸಾರ್ವಜನಿಕ ಸ್ಥಳಗಳು/ಮೈದಾನಗಳು/ ಉದ್ಯಾನವನಗಳು/ಮಾರುಕಟ್ಟೆ/ಧಾರ್ಮಿಕ ಪ್ರದೇಶ ಇತ್ಯಾದಿ ಸ್ಥಳಗಳಲ್ಲಿ ಸಾರ್ವಜನಿಕ ಸಭೆ/ಸಮಾರಂಭಗಳನ್ನು ನಡೆಸದಂತೆ ಆದೇಶಿಸಿದೆ.

ಈ ಆದೇಶವನ್ನು ಕಟ್ಟುನಿಟ್ಟಾಗಿ ಪಾಲಿಸುವುದನ್ನು ಖಚಿತಪಡಿಸಿಕೊಳ್ಳಲು ಪೊಲೀಸ್ ಅಧೀಕ್ಷಕರು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಉಪವಿಭಾಗಾಧಿಕಾರಿಗಳು, ಜಿಲ್ಲೆಯ ಎಲ್ಲಾ ತಾಲ್ಲೂಕಿನ ತಹಶೀಲ್ದಾರ್‌ಗಳು, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಪೌರಾಯುಕ್ತರು/ಮುಖ್ಯಾಧಿಕಾರಿಗಳಿಗೆ ಸೂಚಿಸಿದೆ.

ಈ ಆದೇಶವನ್ನು ಉಲ್ಲಂಘಿಸುವ ಯಾವುದೇ ವ್ಯಕ್ತಿ/ವ್ಯಕಿಗಳ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆ-2005ರ ವಿಭಾಗ 51 ರಿಂದ 60ರ ಅನ್ವಯ, ಐಪಿಸಿ ಸೆಕ್ಷನ್ 188ರಂತೆ ಹಾಗೂ ಕರ್ನಾಟಕ ಸಾಂಕ್ರಾಮಿಕ ರೋಗಗಳ ಕಾಯ್ದೆ-2020ರ ವಿಭಾಗ 4,5 ಮತ್ತು 10ರಂತೆ ಕ್ರಮಗಳನ್ನು ಜರುಗಿಸಲಾಗುವುದು.

ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು
ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ
ಚಿತ್ರದುರ್ಗ ಜಿಲ್ಲೆ

ಪ್ರತಿಯನ್ನು ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ.

1. ಪೊಲೀಸ್ ಅಧೀಕ್ಷಕರು, ಚಿತ್ರದುರ್ಗ ಜಿಲ್ಲೆ.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಚಿತ್ರದುರ್ಗ
3. ಉಪವಿಭಾಗಾಧಿಕಾರಿಗಳು, ಚಿತ್ರದುರ್ಗ ಉಪವಿಭಾಗ, ಚಿತ್ರದುರ್ಗ
4. ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಚಿತ್ರದುರ್ಗ
5. ಜಿಲ್ಲಾ ಆರೋಗ್ಯ & ಕುಟುಂಬ ಕಲ್ಯಾಣಾಧಿಕಾರಿಗಳು, ಚಿತ್ರದುರ್ಗ
6. ಜಿಲ್ಲಾ ಶಸ್ತ್ರಚಿಕಿತ್ಸಕರು, ಜಿಲ್ಲಾ ಆಸ್ಪತ್ರೆ, ಚಿತ್ರದುರ್ಗ
7. ಜಿಲ್ಲೆಯ ಎಲ್ಲಾ ತಾಲ್ಲೂಕಿನ ತಹಶೀಲ್ದಾರ್‌ಗಳು
8. ಜಿಲ್ಲೆಯ ಎಲ್ಲಾ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು,